**ದಿಃ 04-09-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**
**ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ ಎಸ್.ಎಸ್.ಪಿ. ರವರಿಂದಃ-**

ನಾನು ಈ ದಾವೆಯಲ್ಲಿ ವಾದಿಯ ಬ್ಯಾಂಕಿನ ಮ್ಯಾನೇಜರ್ ಇದ್ದು , ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದು ಇರುತ್ತದೆ.

ನಾನು ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ನಾನು ಸಾಲದ ಮಂಜೂರಾತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಾನು ಕಾಂಪೋಸಿಟ್ ಹೈಪಾತಿಕೇಷನ್ ಅಗ್ರಿಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾನು ಗ್ಯಾರೆಂಟಿ ಅಗ್ರಿಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ -4 ಎಂದು ಗುರುತಿಸಲಾಯಿತು. ನಾನು ನಗದು ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -5 ಎಂದು ಗುರುತಿಸಲಾಯಿತು. ನಾನು ಎರಡು acknowledgment of debt ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ -6 ಮತ್ತು 7 ಎಂದು ಗುರುತಿಸಲಾಯಿತು. ನಾನು ಡಿಪಿ ನೋಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ -8 ಎಂದು ಗುರುತಿಸಲಾಯಿತು. ನಾನು ರಿವೈವಲ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಪಿ -9 ಎಂದು ಗುರುತಿಸಲಾಯಿತು. ನಾನು ಪ್ರತಿವಾದಿಯರಿಗೆ ನೀಡಿದ ನೋಟಿಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು. ನಾನು ನಿಪಿ-10 ಕ್ಕೆ ಸಂಬಂಧಪಟ್ಟ 2 ಅಂಚೆ ರಶೀದಿಗಳು ಮತ್ತು ಒಂದು ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-11 ರಿಂದ 13 ಎಂದು ಗುರುತಿಸಲಾಯಿತು. ನಾನು ಪ್ರತಿವಾದಿಯ ಖಾತೆಗೆ

ಸಂಬಂಧಪಟ್ಟ ಸ್ಟೇಟ್ ಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ -14 ಎಂದು ಗುರುತಿಸಲಾಯಿತು. ನಾನು ಪ್ರತಿವಾದಿಯರಿಗೆ ನೀಡಿದ ಪತ್ರಿಕಾ ಪ್ರಕಟಣೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-15 ಎಂದು ಗುರುತಿಸಲಾಯಿತು.

**1 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು ಪ್ರತಿವಾದ ಪತ್ರವನ್ನು ಸಲ್ಲಿಸದೆ ಇರುವುದರಿಂದ ಹಾಗೂ 2 ನೇ ಪ್ರತಿವಾದಿಯು ಏಕಪಕ್ಷೀಯವಾಗಿರುವುದರಿಂದ ಸಾಕ್ಷಿಯ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**ಸಹಿ/-**
**3 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು,**
**ಬೆಳಗಾವಿ.**